**Akashvani : Bangalore**
**Regional Bulletin In Kannada**
**24.07.2026 / 18.40 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

**೧. ಬಳ್ಳಾರಿ-ಗುಂತಕಲ್ ನಡುವಿನ ೧ ಸಾವಿರದ ೨೬೪ ಕೋಟಿ ರೂಪಾಯಿ ವೆಚ್ಚದ ರೈಲು ಮಾರ್ಗಕ್ಕೆ ಕೇಂದ್ರ ಸಚಿವ ಸಂಪುಟ ಅನುಮೋದನೆ**

**೨. ಕಾವೇರಿ ವಿವಾದ; ತಮಿಳುನಾಡು ಸರ್ಕಾರದ ಜೊತೆ ಮಾತನಾಡಲು ಸಿದ್ಧ - ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್**

**೩. ನವೆಂಬರ್ ೧೭ರಿಂದ ೧೯ರ ವರೆಗೆ ೨೯ನೇ ಆವೃತ್ತಿಯ ಬೆಂಗಳೂರು ತಂತ್ರಜ್ಞಾನ ಶೃಂಗಸಭೆ; ೭೫ಕ್ಕೂ ಹೆಚ್ಚು ದೇಶಗಳು ಭಾಗಿ**

**೪. ಪ್ರಸಕ್ತ ಹಣಕಾಸು ವರ್ಷದಲ್ಲಿ ಗಣಿ ಮತ್ತು ಭೂವಿಜ್ಞಾನ ಇಲಾಖೆಯಿಂದ ೧೧ ಸಾವಿರ ಕೋಟಿ ರೂಪಾಯಿ ಆದಾಯ ಗುರಿ**

**೫. ಕೊಡಗಿನ ಹಾರಂಗಿ ಜಲಾಶಯ ಭರ್ತಿಯಾಗಲು ೩ ಅಡಿ ಬಾಕಿ - ನಾಳೆ ನದಿಗೆ ನೀರು ಬಿಡಲು ನಿರ್ಧಾರ**

**<><*<><>*><>**

ಕರ್ನಾಟಕ-ಆಂಧ್ರಪ್ರದೇಶ ಆರ್ಥಿಕ ಕಾರಿಡಾರ್ ಯೋಜನೆಯಡಿ ಗುಂತಕಲ್‌ನಿಂದ ಬಳ್ಳಾರಿ, ಹೊಸಪೇಟೆ-ಹುಬ್ಬಳ್ಳಿ-ಅಂಕೋಲಾದವರೆಗೆ ರೈಲ್ವೆ ಮಾರ್ಗಕ್ಕೆ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ. ೪೬ ಕಿಲೋಮೀಟರ್ ಉದ್ದದ ೩ನೇ ಮತ್ತು ೪ನೇ ರೈಲು ಮಾರ್ಗಗಳನ್ನು ನಿರ್ಮಿಸುವ ಒಂದು ಸಾವಿರದ ೨೬೪ ಕೋಟಿ ರೂಪಾಯಿ ವೆಚ್ಚದ ಬೃಹತ್ ಯೋಜನೆ ಇದಾಗಿದೆ. ಸಂಪುಟ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್, ಪ್ರಧಾನಿ ಅಧ್ಯಕ್ಷತೆಯಲ್ಲಿ ನಡೆದ ಸಂಪುಟದ ಆರ್ಥಿಕ ವ್ಯವಹಾರಗಳ ಸಮಿತಿಯು, ಯೋಜನೆಗೆ ಅನುಮೋದನೆ ನೀಡಿದೆ ಎಂದು ತಿಳಿಸಿದ್ದಾರೆ. ಈ ಯೋಜನೆಯಿಂದ ಉತ್ತರ ಕರ್ನಾಟಕದ ಜನರಿಗೆ ಹೆಚ್ಚು ಅನುಕೂಲವಾಗಲಿದೆ. ಪ್ರಸ್ತಾವಿತ ಮಲ್ಟಿ ಟ್ರ್ಯಾಕಿಂಗ್ ಯೋಜನೆಯು ಸುಮಾರು ೭ ಲಕ್ಷ ಜನಸಂಖ್ಯೆಯನ್ನು ಹೊಂದಿರುವ ೯೯ ಹಳ್ಳಿಗಳಿಗೆ ಸಂಪರ್ಕ ಹೆಚ್ಚಿಸಲಿದೆ. ಇದು ಸರಕು ಸಾಗಾಣೆಯನ್ನು ಸುಗಮಗೊಳಿಸುವುದು, ರೈಲು ಮಾರ್ಗದ ಸಾಮರ್ಥ್ಯವನ್ನು ಹೆಚ್ಚಿಸುವುದು, ಬಹು ಮಾದರಿ ಸಂಪರ್ಕವನ್ನು ಬಲಪಡಿಸುವ ಗುರಿ ಹೊಂದಿದೆ. ಈ ಯೋಜನೆ ೨೦೨೮-೨೯ರ ವೇಳೆಗೆ ಪೂರ್ಣಗೊಳ್ಳುವ ನಿರೀಕ್ಷೆ ಇದೆ.

**<><*<><>*><>**

ಕಾವೇರಿ ನದಿ ನೀರು ಹಂಚಿಕೆ ವಿವಾದಕ್ಕೆ ಸಂಬಂಧಿಸಿದಂತೆ ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್ ಜೊತೆ ಮಾತನಾಡಲು ಸಿದ್ಧ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮಿಳುನಾಡು ಸರ್ಕಾರ ಸೇರಿದಂತೆ ಎಲ್ಲಾ ಪಾಲುದಾರ ರಾಜ್ಯಗಳೊಂದಿಗೆ ಚರ್ಚೆಗೆ ರಾಜ್ಯ ಸರ್ಕಾರ ಮುಕ್ತವಾಗಿದೆ ಎಂದು ಹೇಳಿದ್ದಾರೆ. ಇದೇ ವೇಳೆ ತಮಿಳುನಾಡು ಮುಖ್ಯಮಂತ್ರಿ ಬರೆದ ಪತ್ರದ ವಿಚಾರಗಳನ್ನು ಬಹಿರಂಗಪಡಿಸಲು ಡಿ.ಕೆ. ಶಿವಕುಮಾರ್ ನಿರಾಕರಿಸಿದ್ದಾರೆ.

**<><*<><>*><>**

ಏಷ್ಯಾದ ಅತಿದೊಡ್ಡ ತಂತ್ರಜ್ಞಾನ ಉತ್ಸವವಾಗಿರುವ ಬೆಂಗಳೂರು ತಂತ್ರಜ್ಞಾನ ಶೃಂಗಸಭೆಯ ೨೯ನೇ ಆವೃತ್ತಿಯು ಕೃತಕ ಬುದ್ಧಿಮತ್ತೆ ಹಾಗೂ ಅದರಾಚೆ ಧ್ಯೇಯವಾಕ್ಯದಡಿ ನವೆಂಬರ್ ೧೭ರಿಂದ ೧೯ರ ವರೆಗೆ ಬೆಂಗಳೂರಿನಲ್ಲಿ ನಡೆಯಲಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರಕಟಿಸಿದ್ದಾರೆ. ಈ ಕುರಿತಂತೆ ಮಾಹಿತಿ ನೀಡಿರುವ ಐಟಿ-ಬಿಟಿ ಸಚಿವ ಪ್ರಿಯಾಂಕ್ ಖರ್ಗೆ, ೭೫ಕ್ಕೂ ಹೆಚ್ಚು ದೇಶಗಳಿಂದ ಒಂದು ಸಾವಿರದ ೮೦೦ಕ್ಕೂ

ಹೆಚ್ಚು ಪ್ರದರ್ಶಕರು, ೨೦ ಸಾವಿರಕ್ಕೂ ಹೆಚ್ಚು ಪ್ರತಿನಿಧಿಗಳು ಹಾಗೂ ೬೦ ಸಾವಿರಕ್ಕೂ ಹೆಚ್ಚು ಸಂದರ್ಶಕರು ಭಾಗವಹಿಸುವ ನಿರೀಕ್ಷೆ ಇದೆ ಎಂದು ತಿಳಿಸಿದ್ದಾರೆ. ಭವಿಷ್ಯದ ನಿರ್ಮಾತೃಗಳು ಕಾರ್ಯಕ್ರಮವು ಈ ಭಾರಿಯ ಪ್ರಮುಖ ಆಕರ್ಷಣೆಯಾಗಿದೆ. ನವೋದ್ಯಮಗಳ ಹೂಡಿಕೆದಾರರು, ಮಾರ್ಗದರ್ಶಕರು ಹಾಗೂ ಜಾಗತಿಕ ಮಾರುಕಟ್ಟೆಗಳ ಜೊತೆಗೆ ಸಂಪರ್ಕಿಸುವುದು ಇದರ ಉದ್ದೇಶವಾಗಿದೆ ಎಂದು ಹೇಳಿದ್ದಾರೆ.

**<><*<><>*><>**

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಿಗದಿಪಡಿಸಿರುವ ೧೧ ಸಾವಿರ ಕೋಟಿ ರೂಪಾಯಿ ಆದಾಯ ಸಂಗ್ರಹದ ಗುರಿ ಸಾಧಿಸಲು ಇಲಾಖೆಯ ಪ್ರತಿಯೊಬ್ಬ ಅಧಿಕಾರಿಯೂ ಕಾರ್ಯ ನಿರ್ವಹಿಸಬೇಕು ಎಂದು ಗಣಿ ಮತ್ತು ಭೂವಿಜ್ಞಾನ ಇಲಾಖೆ ಕಾರ್ಯದರ್ಶಿ ರೋಹಿಣಿ ಸಿಂಧೂರಿ ನಿರ್ದೇಶನ ನೀಡಿದ್ದಾರೆ. ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರತಿ ಜಿಲ್ಲೆಯ ಭೂವಿಜ್ಞಾನಿಗಳಿಗೆ ಪ್ರತ್ಯೇಕ ಕಾರ್ಯಗುರಿ ನಿಗದಿಪಡಿಸಲಾಗುವುದು ಎಂದು ತಿಳಿಸಿದ್ದಾರೆ. ಈ ಆರ್ಥಿಕ ವರ್ಷದಲ್ಲಿ ಇಲಾಖೆಗೆ ೧೧ ಸಾವಿರ ಕೋಟಿ ರೂಪಾಯಿ ಆದಾಯ ಸಂಗ್ರಹಿಸುವ ಗುರಿ ನಿಗದಿಪಡಿಸಲಾಗಿದೆ. ಒಟಿಎಸ್ ಯೋಜನೆಯ ಮೂಲಕ ಎರಡು ಸಾವಿರ ಕೋಟಿ ರೂಪಾಯಿ ಆದಾಯ ಸಂಗ್ರಹಿಸುವ ಗುರಿ ಹೊಂದಲಾಗಿದ್ದು, ಮುಂದಿನ ಆರು ತಿಂಗಳಲ್ಲಿ ಗುರಿ ಸಾಧಿಸುವಂತೆ ರೋಹಿಣಿ ಸಿಂಧೂರಿ ಸೂಚಿಸಿದ್ದಾರೆ.

**<><*<><>*><>**

ಸ್ವಯಂ ಅನುಷ್ಠಾನ ಯೋಜನೆಯಡಿ ಕಡ್ಡಾಯವಾಗಿ ನಿರ್ಮಿಸಬೇಕಾದ ವಿದ್ಯುತ್ ಮೂಲಸೌಕರ್ಯವನ್ನು ಸಕಾಲದಲ್ಲಿ ಪೂರ್ಣಗೊಳಿಸದ ಹಾಗೂ ಕೆಇಆರ್‌ಸಿ ನಿಯಮಗಳನ್ನು ಉಲ್ಲಂಘಿಸಿರುವ ಯೋಜನೆಗಳ ವಿರುದ್ಧ ನಿಯಮಾನುಸಾರ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಇಂಧನ ಹಾಗೂ ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ತಿಳಿಸಿದ್ದಾರೆ. ಈ ಕುರಿತಂತೆ ಪ್ರಕಟಣೆ ನೀಡಿರುವ ಅವರು, ೭.೫ ಎಂವಿಎ ಗಿಂತ ಹೆಚ್ಚಿನ ಮಂಜೂರಾತಿ ವಿದ್ಯುತ್ ಭಾರ ಹೊಂದಿರುವ ವಸತಿ ಸಮುಚ್ಛಯಗಳು, ಟೌನ್‌ಶಿಪ್‌ಗಳು, ಬೃಹತ್ ಲೇಔಟ್‌ಗಳು ತಮ್ಮ ವೆಚ್ಚದಲ್ಲಿಯೇ ವಿದ್ಯುತ್ ಉಪಕೇಂದ್ರ ಹಾಗೂ ಸಂಬಂಧಿತ ವಿದ್ಯುತ್ ಮೂಲಸೌಕರ್ಯ ನಿರ್ಮಿಸುವುದು ಕಡ್ಡಾಯವಾಗಿದೆ ಎಂದು ಹೇಳಿದ್ದಾರೆ. ಸಾರ್ವಜನಿಕರಿಗೆ ನಿರಂತರ ಹಾಗೂ ಗುಣಮಟ್ಟದ ವಿದ್ಯುತ್ ಪೂರೈಕೆ ದೊರೆಯುವಂತೆ ಮಾಡುವ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಸಚಿವ ಕೆ.ಜೆ. ಜಾರ್ಜ್ ಸ್ಪಷ್ಟಪಡಿಸಿದ್ದಾರೆ.

**<><*<><>*><>**

ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಬೆಂಗಳೂರಿನಲ್ಲಿಂದು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಸಭೆಯಲ್ಲಿ ಮಂಡಳಿಯ ಯೋಜನೆಗಳ ಪ್ರಗತಿ ಹಾಗೂ ಆಡಳಿತಾತ್ಮಕ ಸುಧಾರಣೆಗಳಿಗೆ ಹಲವು ಪ್ರಮುಖ ನಿರ್ದೇಶನ ನೀಡಿದ್ದಾರೆ. ನಗರ ನೀರು ಸರಬರಾಜು ಮಂಡಳಿಯು ಎಲ್ಲಾ ಪ್ರದೇಶಗಳಲ್ಲಿ ಚರಂಡಿ ಹಾಗೂ ತ್ಯಾಜ್ಯ ನೀರು ಸಂಸ್ಕರಣಾ ಘಟಕಗಳನ್ನು ಸರಿಯಾಗಿ ಮ್ಯಾಪ್ ಮಾಡಿ, ಆಯಾ ಪ್ರದೇಶದ ಸಾಮರ್ಥ್ಯಕ್ಕೆ ಅನುಗುಣವಾಗಿ ಸೂಕ್ತವಾದ ಸುಧಾರಿತ ತಂತ್ರಜ್ಞಾನ ಬಳಕೆ ಮಾಡಿಕೊಳ್ಳುವಂತೆ ಸೂಚಿಸಿದ್ದಾರೆ. ನೀರು ಪೋಲಾಗುವುದು ಸೇರಿದಂತೆ ಸಿಬ್ಬಂದಿ ದುರುಪಯೋಗ ತಡೆಯಲು 'ಸ್ಮಾರ್ಟ್ ಮೀಟರ್' ಅಳವಡಿಸಲು ಸಲಹೆ ನೀಡಿದ್ದಾರೆ. ಗ್ರೇಟರ್ ಬೆಂಗಳೂರು ವ್ಯಾಪಿ ಹೊರತುಪಡಿಸಿ, ರಾಜ್ಯದ ಇತರ ನಗರ ಪ್ರದೇಶಗಳಲ್ಲಿ ನೀರು ಸರಬರಾಜು ಮತ್ತು ಒಳಚರಂಡಿ ಸೌಕರ್ಯ ಒದಗಿಸುವ ಜವಾಬ್ದಾರಿಯನ್ನು ಮಂಡಳಿ ಹೊಂದಿದೆ. ರಾಜ್ಯದಲ್ಲಿ ಈವರೆಗೆ ೨೫೬ ನಗರ ಪ್ರದೇಶಗಳಿಗೆ ಶಾಶ್ವತ ಮೇಲ್ಮೈ ಮೂಲಗಳಿಂದ ಸುರಕ್ಷಿತ ಕುಡಿಯುವ ನೀರು ಕಲ್ಪಿಸಲಾಗಿದ್ದು, ಉಳಿದ ೬೦ ಪಟ್ಟಣಗಳಿಗೆ ಅಂತರ್ಜಲ ಮೂಲದಿಂದ ನೀರು ಪೂರೈಸಲಾಗುತ್ತಿದೆ ಎಂದು ಸಭೆಯಲ್ಲಿ ಮಾಹಿತಿ ನೀಡಿದ್ದಾರೆ.

**<><*<><>*><>**

ಕೊಡಗು ಜಿಲ್ಲೆಯ ಹಾರಂಗಿ ಜಲಾನಯನ ಪ್ರದೇಶದಲ್ಲಿ ಉತ್ತಮ ಮಳೆಯಾಗುತ್ತಿದ್ದು, ಒಳ ಹರಿವಿನ ಪ್ರಮಾಣ ಹೆಚ್ಚಾಗಿದೆ. ಈ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಹಾರಂಗಿ ಅಣೆಕಟ್ಟೆಯಿಂದ ನಾಳೆ ೩ ಸಾವಿರದಿಂದ ೫ ಸಾವಿರ ಕ್ಯೂಸೆಕ್ ನೀರನ್ನು ನದಿಗೆ ಹರಿ ಬಿಡಲಾಗುತ್ತದೆ ಎಂದು ಹಾರಂಗಿ ಪುನರ್ವಸತಿ ವಿಭಾಗದ ಕಾರ್ಯಪಾಲಕ

ಇಂಜಿನಿಯರ್ ಮಹೇಶ್ ಎಂ.ಎಸ್ ತಿಳಿಸಿದ್ದಾರೆ. ಹಾರಂಗಿ ಜಲಾಶಯದ ಗರಿಷ್ಠ ಮಟ್ಟ ೨ ಸಾವಿರದ ೮೫೯ ಅಡಿಗಳಾಗಿದ್ದು, ಇಂದಿನ ಮಟ್ಟ ೨ ಸಾವಿರದ ೮೫೭ ಆಗಿದ್ದು, ಬಹುತೇಕ ಭರ್ತಿಯಾಗಿದೆ. ಹವಾಮಾನ ಇಲಾಖೆಯ ಮುನ್ಸೂಚನೆಯಂತೆ ಜಲಾನಯನ ಪ್ರದೇಶಗಳಲ್ಲಿ ಭಾರೀ ಪ್ರಮಾಣದಲ್ಲಿ ಮಳೆಯಾಗುವ ಸಂಭವವಿದ್ದು, ಒಳಹರಿವಿನ ಪ್ರಮಾಣ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ. ಹಾರಂಗಿ ಮತ್ತು ಕಾವೇರಿ ನದಿ ಪಾತ್ರದ ದಂಡೆಯಲ್ಲಿ ವಾಸಿಸುತ್ತಿರುವ ಜನರು ತಮ್ಮ ಆಸ್ತಿ ಪಾಸ್ತಿ ಹಾಗೂ ಜನಜಾನುವಾರು ರಕ್ಷಣೆಗಳ ಬಗ್ಗೆ ಮುನ್ನೆಚ್ಚರಿಕೆ ವಹಿಸಿ ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಪ್ರಕಟಣೆಯಲ್ಲಿ ಕೋರಿದ್ದಾರೆ

**<><*<><>*><>**

ಪೋಲ್ ವಾಲ್ಟ್ ಕ್ರೀಡೆಯಲ್ಲಿ ಅಮೋಘ ಸಾಧನೆ ಮಾಡುವ ಮೂಲಕ ಜಪಾನ್‌ನಲ್ಲಿ ನಡೆಯಲಿರುವ ಏಷ್ಯನ್ ಗೇಮ್ಸ್‌ಗೆ ಆಯ್ಕೆಯಾಗಿರುವ ಸಿಂಧುಶ್ರೀ ಗಣೇಶ್‌ಗೆ ಉಪಮುಖ್ಯಮಂತ್ರಿ ಹಾಗೂ ಕ್ರೀಡಾ ಸಚಿವ ಡಾ.ಜಿ.ಪರಮೇಶ್ವರ್ ಅಂತಾರಾಷ್ಟ್ರೀಯ ಗುಣಮಟ್ಟದ ೩ ಪೋಲ್‌ಗಳನ್ನು ವಿತರಿಸಿ, ಶುಭ ಹಾರೈಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಿವಮೊಗ್ಗ ಜಿಲ್ಲೆಯ ಭದ್ರಾವತಿಯ ಸಿಂಧುಶ್ರೀ ಪೋಲ್ ವಾಲ್ಟ್ ಕ್ರೀಡೆಯಲ್ಲಿ ಸಾಧನೆ ಮಾಡಿದ್ದಾರೆ. ಈ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಕ್ರೀಡಾ ಮತ್ತು ಯುವಸಬಲೀಕರಣ ಇಲಾಖೆ ಹಾಗೂ ಭಾರತೀಯ ಕ್ರೀಡಾ ಪ್ರಾಧಿಕಾರದ ವತಿಯಿಂದ ಅಂತಾರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಬಳಸುವ ಗುಣಮಟ್ಟದ ೩ ಹೊಸ ಪೋಲ್‌ಗಳನ್ನು ವಿದೇಶದಿಂದ ತರಿಸಿ ಕೊಡಲಾಗಿದೆ. ಜೊತೆಗೆ ೫ ಲಕ್ಷ ರೂಪಾಯಿ ನಗದು ನೀಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

**<><*<><>*><>**

ಮಂಗಳೂರಿನಲ್ಲಿ ರಾಷ್ಟ್ರೀಯ ಭದ್ರತಾ ದಳ - ಎನ್‌ಎಸ್‌ಜಿ, ನಗರದ ವಿವಿಧ ಪ್ರದೇಶಗಳಲ್ಲಿ ಭಯೋತ್ಪಾದನಾ ನಿಗ್ರಹ ಅಣಕು ಕಾರ್ಯಾಚರಣೆ ನಡೆಸುತ್ತಿದೆ. ನಾಳೆವರೆಗೆ ಈ ಅಣಕು ಕಾರ್ಯಾಚರಣೆ ನಡೆಯಲಿದೆ. ಭಯೋತ್ಪಾದಕರ ದಾಳಿ ಸಂಭವಿಸಿದರೆ ಅದನ್ನು ಹೇಗೆ ಎದುರಿಸಬೇಕು ಎಂಬ ಸನ್ನದ್ಧತೆಯನ್ನು ಅಣಕು ಕಾರ್ಯಾಚರಣೆ ಮೂಲಕ ತಿಳಿಸಲು ಎನ್‌ಎಸ್‌ಜಿ ಕಮಾಂಡೋಗಳು ನಗರಕ್ಕೆ ಆಗಮಿಸಿದ್ದಾರೆ. ಮಂಗಳೂರಿನ ಎಂಆರ್‌ಪಿಎಲ್ ಸ್ಥಾವರ, ಸುರತ್ಕಲ್, ಸಂತ ಅಲೋಶಿಯಸ್ ಕಾಲೇಜು ಆವರಣ ಮುಂತಾದೆಡೆ ಕಾರ್ಯಾಚರಣೆ ನಡೆಸಲಾಗಿದೆ. ಸುಮಾರು ೧೦೦ಕ್ಕೂ ಅಧಿಕ ಮಂದಿ ಅಧಿಕಾರಿಗಳು ಹಾಗೂ ಸಿಬ್ಬಂದಿ ಅಣಕು ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದಾರೆ.

**<><*<><>*><>**

ಬಳ್ಳಾರಿ ಜಿಲ್ಲೆಯಲ್ಲಿ ಇನ್ನೂ ಬಾಲ್ಯ ವಿವಾಹಗಳು ನಡೆಯುತ್ತಿರುವುದು ಅತ್ಯಂತ ಕಳವಳಕಾರಿಯಾಗಿದೆ ಎಂದು ಪ್ರಧಾನ ಜಿಲ್ಲಾ ನ್ಯಾಯಾಧೀಶ ಸಿದ್ಧಲಿಂಗ ಪ್ರಭು ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**